**Akashvani : Bangalore**
**National Bulletin In Kannada**
**19.03.2025 / 7.35 am**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**19.03.2025 / 7.35 am**

**<><*<><>*><>**

<u>ಮುಖ್ಯಾಂಶಗಳು</u>

**೧. ೯ ತಿಂಗಳಿನಿಂದ ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣದಲ್ಲಿ ಸಿಲುಕಿದ್ದ ಭಾರತೀಯ ಮೂಲದ ಗಗನಯಾನಿ ಸುನಿತಾ ವಿಲಿಯಮ್ಸ್, ಸಹ ಗಗನಯಾತ್ರಿ ಬುಚ್ ವಿಲ್ಮೋರ್ ಸುರಕ್ಷಿತವಾಗಿ ಭೂಮಿಗೆ ಆಗಮನ**

**೨. ಹೊಸ ತಂತ್ರಜ್ಞಾನಗಳಲ್ಲಿ ನಿರಂತರವಾಗಿ ಹೂಡಿಕೆ ಮಾಡಲು ಅವಕಾಶ; ಅತಿ ಕಡಿಮೆ ಅವಧಿಯಲ್ಲಿ ಭಾರತಕ್ಕೆ ಸಿಗಲಿದೆ ಮುಂಚೂಣಿ ಸ್ಥಾನ**

**೩. ಕರ್ನಾಟಕ ರಾಜ್ಯಾದ್ಯಂತ ಇದೇ ೨೧ ರಿಂದ ಏಪ್ರಿಲ್ ೪ ರವರೆಗೆ ಎಸ್.ಎಸ್.ಎಲ್.ಸಿ. ಪರೀಕ್ಷೆ : ಬಹುತೇಕ ಎಲ್ಲ ಜಿಲ್ಲೆಗಳಲ್ಲಿ ಸಿದ್ಧತೆ ಪೂರ್ಣ**

**೪. ಕಬಡ್ಡಿ: ಇಂಗ್ಲೆಂಡ್‌ನ ವೊಲ್ವರ್‌ಹ್ಯಾಂಪ್ಟನ್‌ನಲ್ಲಿ ಕಬಡ್ಡಿ ವಿಶ್ವಕಪ್ ಪಂದ್ಯದಲ್ಲಿ, ಹಾಲಿ ಚಾಂಪಿಯನ್ ಭಾರತ ಹಾಗೂ ಸ್ಕಾಟ್ಲೆಂಡ್ ನಡುವಿನ ಪಂದ್ಯ ಡ್ರಾನಲ್ಲಿ ಅಂತ್ಯ**

**<><*<><>*><>**

ಸುಮಾರು ೯ ತಿಂಗಳಿನಿಂದ ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣದಲ್ಲಿ (ಐಎಸ್‌ಎಸ್) ಸಿಲುಕಿದ್ದ ಭಾರತೀಯ ಮೂಲದ ಗಗನಯಾನಿ ಸುನಿತಾ ವಿಲಿಯಮ್ಸ್ ಮತ್ತು ಸಹ ಗಗನಯಾತ್ರಿ ಬುಚ್ ವಿಲ್ಮೋರ್ ಕಡೆಗೂ ಸುರಕ್ಷಿತವಾಗಿ ಭೂಮಿಗೆ ಮರಳಿದ್ದಾರೆ. ಸಹ ಗಗನಯಾತ್ರಿಗಳಾದ ನಿಕ್ ಹೇಗ್ ಮತ್ತು ರಷ್ಯಾದ ಗಗನಯಾತ್ರಿ ಅಲೆಕ್ಸಾಂಡರ್ ಗೋರ್ಬುನೋವ್ ಒಳಗೊಂಡಂತೆ ಒಟ್ಟು ನಾಲ್ವರನ್ನು ಹೊತ್ತ ‘ಸ್ಪೇಸೆಕ್ಸ್ ಕ್ರ್ಯೂ ಡ್ರ್ಯಾಗನ್’ ಗಗನನೌಕೆ ಸುರಕ್ಷಿತವಾಗಿ ಇಂದು ಭಾರತೀಯ ಕಾಲಮಾನ ಬೆಳಗಿನ ಜಾವ ೩.೩೭ಕ್ಕೆ ಫ್ಲೋರಿಡಾ ಕರಾವಳಿಯಲ್ಲಿ ಇಳಿದಿದೆ. ಸ್ಪೇಸ್ ಎಕ್ಸ್‌ನ ಡ್ರ್ಯಾಗನ್ ನೌಕೆ ನಾಲ್ವರನ್ನೂ ಭೂಮಿಗೆ ವಾಪಸ್ ಕರೆತರುವಲ್ಲಿ ಯಶಸ್ವಿಯಾಗಿದೆ. ಬಳಿಕ ಹಡಗಿನ ಸಹಾಯದಿಂದ ಗಗನಯಾತ್ರಿಗಳನ್ನು ನೌಕೆಯಿಂದ ಹೊರತರಲಾಗಿದ್ದು, ನಾಲ್ವರೂ ಗಗನಯಾತ್ರಿಗಳು ಆರೋಗ್ಯವಾಗಿದ್ದಾರೆ. ಗಗನನೌಕೆಯು ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣದಿಂದ ನಿನ್ನೆ ಬೆಳಗ್ಗೆ ೧೦.೩೦ಕ್ಕೆ ನಿರ್ಗಮಿಸಿತ್ತು. ಸುಮಾರು ೧೭ ಗಂಟೆಗಳ ಸುದೀರ್ಘ ಯಾನದ ಬಳಿಕ ಮುಂಜಾನೆ ೩.೩೭ಕ್ಕೆ ‘ಕ್ರ್ಯೂ ಡ್ರ್ಯಾಗನ್’ ಗಗನನೌಕೆ ಸಮುದ್ರಸ್ಪರ್ಶ ಮಾಡಿದೆ. ಇದಕ್ಕೂ ಮುನ್ನ ಗಗನನೌಕೆಯಲ್ಲಿ ಅಳವಡಿಸಲಾಗಿರುವ ಪ್ಯಾರಾಶ್ಯೂಟ್‌ಗಳು ತೆರೆದುಕೊಂಡು ಗಗನನೌಕೆಯ ವೇಗವನ್ನು ತಗ್ಗಿಸುವ ಮೂಲಕ ಸುರಕ್ಷಿತವಾಗಿ ಅದು ಸಮುದ್ರಕ್ಕೆ ಬೀಳುವಂತೆ ಮಾಡಲಾಯಿತು. ವಿಲಿಯಮ್ಸ ಮತ್ತು ವಿಲ್ಮೋರ್ ಜೂನ್ ೫, ೨೦೨೪ ರಂದು ಬೋಯಿಂಗ್‌ನ ಸ್ಟಾರ್‌ಲೈನರ್ ಬಾಹ್ಯಾಕಾಶ ನೌಕೆಯಲ್ಲಿ ಬಾಹ್ಯಾಕಾಶಕ್ಕೆ ತೆರಳಿದ್ದರು. ಆದರೆ ಪ್ರೊಪಲ್ಷನ್ ಸಿಸ್ಟಮ್

ಅಸಮರ್ಪಕ ಕಾರ್ಯನಿರ್ವಹಣೆ ಸೇರಿದಂತೆ ತಾಂತ್ರಿಕ ಸಮಸ್ಯೆಗಳಿಂದ ಅವರ ಸಕಾಲಿಕ ಮರಳುವಿಕೆ ವಿಳಂಬವಾಯಿತು. ಸೆಪ್ಟೆಂಬರ್ ೨೦೨೪ರಲ್ಲಿ ಸ್ಟಾರ್‌ಲೈನರ್ ಅನ್ನು ಸುರಕ್ಷತೆ ದೃಷ್ಟಿಯಿಂದ ಸಿಬ್ಬಂದಿಯಿಲ್ಲದೆಯೇ ಭೂಮಿಗೆ ವಾಪಾಸ್ ಕರೆಸಿಕೊಳ್ಳಲಾಯಿತು. ಕೊನೆಯ ಆಯ್ಕೆಯೆಂಬಂತೆ, ಐಎಸ್‌ಎಸ್‌ನಲ್ಲಿ ಸಿಲುಕಿದ ಸುನಿತಾ ಮತ್ತು ವಿಲ್ಮೋರ್ ಅವರನ್ನು ಭೂಮಿಗೆ ಕರೆಸಿಕೊಳ್ಳಲು ಉದ್ಯಮಿ ಎಲಾನ್ ಮಸ್ಕ್ ಒಡೆತನದ 'ಸ್ಪೇಸೆಕ್ಸ್' ಜತೆ ನಾಸಾ ಕೈಜೋಡಿಸಿತು. ಈ ಕಾರ್ಯಾಚರಣೆ ಈಗ ಯಶಸ್ವಿಯಾಗಿ ಪೂರ್ಣಗೊಂಡಿದೆ. ಸುನೀತಾ ವಿಲಿಯಮ್ಸ್ ಮತ್ತು ಸಹ ಗಗನಯಾತ್ರಿಗಳಾದ ಬುಚ್ ವಿಲ್ಮೋರ್, ನಿಕ್ ಹೇಗ್ ಹಾಗೂ ಅಲೆಕ್ಸಾಂಡರ್ ಗೋರ್ಬುನೋವ್ ಸುರಕ್ಷಿತವಾಗಿ ಭೂಮಿಗೆ ಮರಳಿದ್ದಾರೆ.

<><*<><>*><>

ರಕ್ಷಣಾ ಗುಪ್ತಚರ ಸಂಸ್ಥೆಯ ಮಹಾ ನಿರ್ದೇಶಕರಾದ ಲೆಫ್ಟಿನೆಂಟ್ ಜನರಲ್ ಡಿ.ಎಸ್.ರಾಣಾ, ಇಂದು ಆಸ್ಟ್ರೇಲಿಯಾಕ್ಕೆ ಪ್ರಯಾಣ ಬೆಳೆಸಲಿದ್ದಾರೆ. ಭಾರತ ಮತ್ತು ಆಸ್ಟ್ರೇಲಿಯಾ ನಡುವಿನ ರಕ್ಷಣಾ ಗುಪ್ತಚರ ಸಹಕಾರವನ್ನು ಬಲಪಡಿಸುವ ಹಾಗೂ ಕಾರ್ಯತಂತ್ರವನ್ನು ಹೆಚ್ಚಿಸುವ ಗುರಿಯನ್ನು ಈ ಭೇಟಿ ಹೊಂದಿದೆ. ತಮ್ಮ ಭೇಟಿಯ ಸಂದರ್ಭದಲ್ಲಿ ಅವರು ಆಸ್ಟ್ರೇಲಿಯಾದ ಹಿರಿಯ ರಕ್ಷಣಾ ಅಧಿಕಾರಿಗಳೊಂದಿಗೆ ಗುಪ್ತಚರ ಮಾಹಿತಿ ಹಂಚಿಕೆ ಕಾರ್ಯವಿಧಾನಗಳು, ಪ್ರಾದೇಶಿಕ ಭದ್ರತಾ ಸಹಕಾರ ಮತ್ತು ಇಂಡೊ-ಪೆಸಿಫಿಕ್ ಪ್ರದೇಶದಲ್ಲಿ ಹೆಚ್ಚಿನ ಸಹಯೋಗ ಕುರಿತು ಚರ್ಚೆ ನಡೆಸಲಿದ್ದಾರೆ. ಈ ಭೇಟಿಯು, ಉಭಯ ದೇಶಗಳ ನಡುವಿನ ಗುಪ್ತಚರ ಮತ್ತು ಭದ್ರತಾ ಸಹಕಾರವನ್ನು ಬಲಗೊಳಿಸಲಿದೆ. ಶಾಂತಿ, ಸ್ಥಿರತೆ ಮತ್ತು ಭದ್ರತೆಯನ್ನು ಕಾಪಾಡಿಕೊಳ್ಳಲು ಎರಡೂ ರಾಷ್ಟ್ರಗಳ ಬದ್ಧತೆಯನ್ನು ಬಲಪಡಿಸುತ್ತದೆ.

<><*<><>*><>

ಭಾರತದಲ್ಲಿ ಕೃತಕ ಬುದ್ಧಿಮತ್ತೆ ಬೆಳವಣಿಗೆಗೆ ಸಾರ್ವಜನಿಕ ಡೇಟಾಸೆಟ್‌ಗಳ ಪ್ರವೇಶವು ನಿರ್ಣಾಯಕವಾಗಿದೆ ಎಂದು ಕೇಂದ್ರ ವಿದ್ಯುನ್ಮಾನ ಮತ್ತು ಮಾಹಿತಿ ತಂತ್ರಜ್ಞಾನ ಸಚಿವೆ ಅಶ್ವಿನ್ ವೈಷ್ಣವ್ ಹೇಳಿದ್ದಾರೆ. ನವದೆಹಲಿಯಲ್ಲಿ ನಡೆದ ರೈಸಿನಾ ಸಂವಾದ ೨೦೨೫ರಲ್ಲಿ ಸಚಿವ ಅಶ್ವಿನ್ ವೈಷ್ಣವ್ ತಮ್ಮ ಅಭಿಪ್ರಾಯ ಮಂಡಿಸಿದರು. AI ಕೋಶ್ ಎಂಬ ದೊಡ್ಡ ಡೇಟಾಸೆಟ್‌ಗಳನ್ನು ನಿರ್ಮಿಸಲಾಗಿದೆ ಮತ್ತು ಇತರ ಬಹುಭಾಷಾ ಡೇಟಾ ಮೂಲ ಅಳವಡಿಸಲಾಗಿದೆ. GPUಗಳನ್ನು ಕಂಪ್ಯೂಟ್ ಮಾಡುವುದು ನಡೆಯುತ್ತಿದೆ. ೧೪,೦೦೦ GPUಗಳು ಈಗಾಗಲೇ ಉದ್ಘಾಟನೆಗೊಂಡಿವೆ ಎಂದು ಅವರು ತಿಳಿಸಿದರು.

**ಧ್ವನಿ: ಅಶ್ವಿನ್ ವೈಷ್ಣವ್ ( ೩೫ ಸೆಕೆಂಡ್)**

ದೀರ್ಘಕಾಲದವರೆಗೆ ಬಹು ಭಾಷೆಗಳಲ್ಲಿ ಸಂಗ್ರಹವಾದ ವಿಶಾಲವಾದ ಡೇಟಾಸೆಟ್ ಅನ್ನು ಹೊಂದಿರುವುದರಿಂದ, ಭಾರತ AI ಮಿಷನ್ ಮತ್ತು ಭಾರತೀಯ ಸಂಸತ್ತಿನ ನಡುವಿನ ಒಪ್ಪಂದಕ್ಕೆ ಸಹಿ ಹಾಕಲಾಗಿದೆ.

ಅಲ್ಪಾವಧಿಯಲ್ಲಿ, ದೇಶವು ತನ್ನ ಐಟಿ ಉದ್ಯಮವನ್ನು AI ಗಾಗಿ ಸಿದ್ಧಪಡಿಸಬೇಕು. ಮಧ್ಯಮ ಅವಧಿಯಲ್ಲಿ, ಅದು ತನ್ನದೇ ಆದ ವ್ಯವಸ್ಥೆಗಳನ್ನು ಸ್ಥಾಪಿಸಬೇಕು. ವಿಶ್ವವಿದ್ಯಾಲಯಗಳು ತಮ್ಮ ಪಠ್ಯಕ್ರಮವನ್ನು ನವೀಕರಿಸುವುದನ್ನು ಖಚಿತಪಡಿಸಿಕೊಳ್ಳಬೇಕು. ದೀರ್ಘಾವಧಿಯಲ್ಲಿ ಭಾರತವು ಹೊಸ ತಂತ್ರಜ್ಞಾನಗಳಲ್ಲಿ ನಿರಂತರವಾಗಿ ಹೂಡಿಕೆ

ಮಾಡಬೇಕು ಮತ್ತು ೨೦೪೭ ರ ವೇಳೆಗೆ AI ನಲ್ಲಿ ಮುಂಚೂಣಿಯಲ್ಲಿರಬೇಕು ಎಂದು ಸಚಿವ ಅಶ್ವಿನ್ ವೈಷ್ಣವ್ ಹೇಳಿದರು.

<><*<><>*><>

ಕರ್ನಾಟಕ ರಾಜ್ಯಾದ್ಯಂತ ಇದೇ ೨೧ ರಿಂದ ಏಪ್ರಿಲ್ ೪ರವರೆಗೆ ಎಸ್.ಎಸ್.ಎಲ್.ಸಿ. ಪರೀಕ್ಷೆ ನಡೆಯಲಿದೆ. ಇದಕ್ಕಾಗಿ ಎಲ್ಲ ಜಿಲ್ಲೆಗಳಲ್ಲಿ ಸಕಲ ಸಿದ್ಧತೆ ಪೂರ್ಣಗೊಂಡಿದೆ. ಕೋಲಾರ ಜಿಲ್ಲೆಯಲ್ಲಿ ಪ್ರಸ್ತುತ ೨೧ ಸಾವಿರದ ೭೫ ವಿದ್ಯಾರ್ಥಿಗಳು ೭೫ ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆ ಬರೆಯಲಿದ್ದಾರೆ ಎಂದು ಜಿಲ್ಲಾಧಿಕಾರಿ ಡಾ.ಎಂ.ಆರ್. ರವಿ ತಿಳಿಸಿದ್ದಾರೆ. ಕಾರವಾರದಲ್ಲಿ ಜಿಲ್ಲಾಧಿಕಾರಿ ಕೆ. ಲಕ್ಷ್ಮೀಪ್ರಿಯ ಮಾತನಾಡಿ, ವಿದ್ಯಾರ್ಥಿಗಳು ಯಾವುದೇ ಆತಂಕಕ್ಕೆ ಒಳಗಾಗದೇ ಆತ್ಮವಿಶ್ವಾಸದಿಂದ ಪರೀಕ್ಷೆ ಬರೆಯಬೇಕೆಂದು ಕಿವಿಮಾತು ಹೇಳಿದರು. ಅವರು ಕಾರವಾರ ತಾಲೂಕಿನ ಶಿರವಾಡದ ಪ್ರೌಢಶಾಲೆಗೆ ಭೇಟಿ ನೀಡಿ, ಎಸ್.ಎಸ್.ಎಲ್.ಸಿ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿದರು. ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಪರೀಕ್ಷೆಗಾಗಿ ಅಗತ್ಯ ಸಿದ್ಧತೆ ಮಾಡಿಕೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ಎ.ಬಿ.ಬಸವರಾಜು ತಿಳಿಸಿದ್ದಾರೆ. ಜಿಲ್ಲಾಡಳಿತ ಭವನದ ಸಭಾಂಗಣದಲ್ಲಿ ನಡೆದ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಅವರು, ಎಸ್.ಎಸ್.ಎಲ್.ಸಿ ಪರೀಕ್ಷೆಯ ಫಲಿತಾಂಶ ಉತ್ತಮಪಡಿಸುವ ನಿಟ್ಟಿನಲ್ಲಿ ಅಧಿಕಾರಿಗಳೊಂದಿಗೆ ಪರಾಮರ್ಶೆ ಮಾಡಲಾಗಿದೆ ಎಂದು ಅವರು ಹೇಳಿದರು.

<><*<><>*><>

ಇಂಗ್ಲೆಂಡ್‌ನ ವೊಲ್ವರ್‌ಹ್ಯಾಂಪ್ಟನ್‌ನಲ್ಲಿ ಕಳೆದ ರಾತ್ರಿ ನಡೆದ ಕಬಡ್ಡಿ ವಿಶ್ವಕಪ್ ಪಂದ್ಯದಲ್ಲಿ, ಹಾಲಿ ಚಾಂಪಿಯನ್ ಭಾರತದ ಪುರುಷರ ತಂಡ ಹಾಗೂ ಸ್ಕಾಟ್ಲೆಂಡ್ ನಡುವಿನ ಪಂದ್ಯವು ೩೪-೩೪ ಅಂಕಗಳೊಂದಿಗೆ ಡ್ರಾದಲ್ಲಿ ಕೊನೆಗೊಂಡಿತು. ಭಾರತವು ಬಲಿಷ್ಠವಾಗಿ ಆಟ ಆರಂಭಿಸಿ, ಮೊದಲ ಕೆಲವು ನಿಮಿಷಗಳಲ್ಲಿ ಮುನ್ನಡೆ ಸಾಧಿಸಿತು. ಆದರೆ ನಂತರದಲ್ಲಿ ಸ್ಕಾಟ್ಲೆಂಡ್ ಬಲಿಷ್ಠವಾಗಿ ತಿರುಗೇಟು ನೀಡಿತು. ಒಂದು ಹಂತದಲ್ಲಿ ಸ್ಕಾಟ್ಲೆಂಡ್ ತಂಡ ಮೇಲುಗೈ ಸಾಧಿಸಲು ಮುಂದಾಯಿತಾದರೂ ಭಾರತದ ಆಟಗಾರರು ಇದಕ್ಕೆ ಹೆಚ್ಚಿನ ಅವಕಾಶ ನೀಡಲಿಲ್ಲ. ಆಕ್ರಮಣಕಾರಿ ಆಟವಾಡಿ ಪಂದ್ಯದ ಮೇಲೆ ಹಿಡಿತ ಸಾಧಿಸುವಲ್ಲಿ ಭಾರತೀಯ ಆಟಗಾರರು ಯಶಸ್ವಿಯಾದರು. ಪಂದ್ಯ ೩೪-೩೪ ಅಂಕಗಳೊಂದಿಗೆ ಡ್ರಾನಲ್ಲಿ ಕೊನೆಗೊಂಡಿತು. ಮುಂದಿನ ಪಂದ್ಯದಲ್ಲಿ ಭಾರತ ತಂಡ ಹಾಂಗ್‌ಹಾಂಗ್ ಚೀನಾವನ್ನು ಎದುರಿಸಲಿದ್ದು, ಸ್ಕಾಟ್ಲೆಂಡ್ ಇಟಲಿಯನ್ನು ಎದುರಿಸಲಿದೆ. ಮಹಿಳೆಯರ ವಿಭಾಗದಲ್ಲಿ, ಭಾರತೀಯ ಮಹಿಳಾ ತಂಡವು ಗೆಲುವಿನೊಂದಿಗೆ ತನ್ನ ಅಭಿಯಾನವನ್ನು ಆರಂಭಿಸಿತು, ಡಿ ಗುಂಪಿನ ಪಂದ್ಯದಲ್ಲಿ ಭಾರತ ತಂಡ ವೇಲ್ಸ್ ತಂಡವನ್ನು ೮೯-೧೮ ಅಂಕಗಳ ಅಂತರದಿಂದ ಸೋಲಿಸಿ ಮೇಲುಗೈ ಸಾಧಿಸಿದೆ.

<><*<><>*><>

ಖೇಲೋ ಇಂಡಿಯಾ ಪ್ಯಾರಾ ಗೇಮ್ಸ್ ೨೦೨೫ ರ ಗೀತೆ, ಮ್ಯಾಸ್ಕಾಟ್ ಮತ್ತು ಲೋಗೋವನ್ನು, ನವದೆಹಲಿಯಲ್ಲಿ ಯುವ ವ್ಯವಹಾರಗಳು ಮತ್ತು ಕ್ರೀಡಾ ಸಚಿವ ಡಾ. ಮನ್ಸುಖ್ ಮಾಂಡವಿಯಾ ಅವರ ಸಮ್ಮುಖದಲ್ಲಿ ಬಿಡುಗಡೆ ಮಾಡಲಾಯಿತು. ಖೇಲೋ ಇಂಡಿಯಾ ಪ್ಯಾರಾ ಗೇಮ್ಸ್ ನಾಳೆಯಿಂದ ಇದೇ ೨೭ ರವರೆಗೆ ರಾಷ್ಟ್ರ ರಾಜಧಾನಿ ದೆಹಲಿಯಲ್ಲಿ ನಡೆಯಲಿದೆ. ಈ ಸಂದರ್ಭದಲ್ಲಿ ಮಾತನಾಡಿದ ಸಚಿವರು, ಖೇಲೋ ಇಂಡಿಯಾ ಉಪಕ್ರಮವು ಕ್ರೀಡಾಪಟುಗಳಿಗೆ ಗಮನಾರ್ಹ ವೇದಿಕೆಯನ್ನು ನೀಡಿದೆ, ಇದರಿಂದಾಗಿ ಜಾಗತಿಕ ವೇದಿಕೆಯಲ್ಲಿ ದೇಶದ ಖ್ಯಾತಿ ಹೆಚ್ಚಿದೆ ಎಂದು ಹೇಳಿದರು.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೧೨ ಕ್ಕೆ <>*><>**